# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 319

ಉತ್ತರಿಸುವ ದಿನಾಂಕ : 09-12-2020

ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ಸಚಿವರು : ಕೃಷಿ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಂಡ್ಯ, ಮೈಸೂರು, ಚಾಮರಾಜನಗರ ಮತ್ತು ಹಾಸನ ಜಿಲ್ಲೆಗಳಲ್ಲಿ ಬೆಳೆ ಕಟಾವು ಪ್ರಾರಂಭವಾಗಿದ್ದು, ಕೃಷಿ ಯಂತ್ರೋಪಕರಣಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಮಂಡ್ಯ, ಮೈಸೂರು, ಚಾಮರಾಜನಗರ ಮತ್ತು ಹಾಸನ ಜಿಲ್ಲೆಗಳಲ್ಲಿ ಬೆಳೆ ಕಟಾವು ಪ್ರಾರಂಭವಾಗಿದ್ದು, ಅವಶ್ಯಕವಿರುವ ವಿವಿಧ ಕೃಷಿ ಯಂತ್ರೋಪಕರಣಗಳ ಸರಬರಾಜಿಗೆ ಕ್ರಮಕೈಗೊಳ್ಳಲಾಗಿರುತ್ತದೆ. |
| ಆ) | ಇದುವರೆವಿಗೂ ಕೃಷಿ ಯಂತ್ರೋಪಕರಣಗಳನ್ನು ಒದಗಿಸದೆ ಇರಲು ಕಾರಣಗಳೇನು; | 2020-21ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ಕ್ರಿಯಾ ಯೋಜನೆಯನ್ವಯ ಕೇಂದ್ರ ಮತ್ತು ರಾಜ್ಯ ಸರ್ಕಾರದ ಅನುದಾನವನ್ನು ಒದಗಿಸಿ ಕೃಷಿ ಯಂತ್ರೋಪಕರಣಗಳನ್ನು ಒದಗಿಸಲಾಗಿರುತ್ತದೆ. |
| ಇ) | ಯಾವ ಕಾಲಮಿತಿಯಲ್ಲಿ ಕೃಷಿ ಯಂತ್ರೋಪಕರಣಗಳನ್ನು ಸರಬರಾಜು ಮಾಡಲಾಗುವುದು? | ಕೇಂದ್ರ ಸರ್ಕಾರವು ಕೇಂದ್ರ ವಲಯ ಕೃಷಿ ಯಾಂತ್ರೀಕರಣ ಮತ್ತು ಉಪ ಅಭಿಯಾನ ಯೋಜನೆಯಡಿ ಕೃಷಿ ಮತ್ತು ತೋಟಗಾರಿಕೆ ಇಲಾಖೆ ಒಳಗೊಂಡಂತೆ ಎರಡನೇ ಕಂತಿನ ಅನುದಾನ ಬಿಡುಗಡೆಗೊಳಿಸಿರುತ್ತದೆ. ಸದರಿ ಅನುದಾನಕ್ಕೆ, ರಾಜ್ಯ ಸರ್ಕಾರದ ಅನುಮೋದನೆಯೊಂದಿಗೆ ಜಿಲ್ಲೆಗಳಿಗೆ ಕ್ರಿಯಾ ಯೋಜನೆಯನ್ನು ನೀಡಿ, ಕೃಷಿ ಯಂತ್ರೋಪಕರಣಗಳನ್ನು ಸರಬರಾಜು ಮಾಡಲು ಕ್ರಮಕೈಗೊಳ್ಳಲಾಗಿದೆ. |

AGRI-ASC/64/2020

(ಬಿ.ಸಿ.ಪಾಟೀಲ್)

ಕೃಷಿ ಸಚಿವರು